# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **1148** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ ಡಿ.ಎಸ್.ಅರುಣ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ )** |
| **ಉತ್ತರಿಸಬೇಕಾದ ದಿನಾಂಕ** | **15.12.2023** |
| **ಉತ್ತರಿಸುವ ಸಚಿವರು** | **ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | OBC/SC/ST ವರ್ಗಗಳ ಅಭ್ಯರ್ಥಿಗಳು ಜಾತಿ ಮೀಸಲಾತಿ ಕೋರಿ ಸಾಮಾನ್ಯ ವರ್ಗದಡಿಯಲ್ಲಿ (GM) ಆಯ್ಕೆಯಾದರೆ ಎಲ್ಲಾ ವರ್ಗಗಳ ಅಭ್ಯರ್ಥಿಗಳು ಸಿಂಧುತ್ವ ಪರಿಶೀಲನೆಗೆ ಒಳಪಡಿಸುವುದು ಕಡ್ಡಾಯವೇ: | ಕರ್ನಾಟಕ ಅನುಸೂಚಿತ ಜಾತಿಗಳು, ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ (ನೇಮಕಾತಿ ಮುಂತಾದವುಗಳ ಮೀಸಲಾತಿ) ನಿಯಮಗಳು- 1992, ನಿಯಮ- 9 ರಲ್ಲಿ "ನೇಮಕಾತಿ- ಸಿಂಧುತ್ವ ಪ್ರಮಾಣ ಪತ್ರ ಪಡೆಯದ ಯಾವುದೇ ವ್ಯಕ್ತಿಯನ್ನು ಸರ್ಕಾರದ ಸೇವೆಗಾಗಲೀ ಅಥವಾ ಹುದ್ದೆಗಾಗಲೀ ಇಲ್ಲವೇ ಸಾರ್ವಜನಿಕ ಕ್ಷೇತ್ರದ ಕಾರ್ಯ ಸಂಸ್ಥೆಗಾಗಲಿ ನೇಮಕ ಮಾಡತಕ್ಕದ್ದಲ್ಲ" ಎಂಬ ನಿಯಮ ಚಾಲ್ತಿಯಲ್ಲಿರುತ್ತದೆ. |
| ಆ) | ಹಿಂದುಳಿದ ವರ್ಗದ ಅಭ್ಯರ್ಥಿಗಳು (OBC) ಸಾಮಾನ್ಯ ವರ್ಗದಡಿ ಯಲ್ಲಿ ಆಯ್ಕೆಯಾದರೆ ಇಂಥವರಿಗೆ ಮಾತ್ರ ಸಿಂಧುತ್ವ ಪರಿಶೀಲನೆಯಿಂದ ವಿನಾಯಿತಿ ಇದೆಯೇ: | |
| ಇ) | ಹಿಂದುಳಿದ ವರ್ಗದ ಅಭ್ಯರ್ಥಿಗಳು, ಸಾಮಾನ್ಯ ವರ್ಗದಡಿಯಲ್ಲಿ ಆಯ್ಕೆಯಾದಾಗಲೂ ಇಂಥವರಿಗೆ ಸಿಂಧುತ್ವ ಪರಿಶೀಲನೆಗೆ ಒಳಪಡಿಸುವುದ ರಿಂದ ನೇಮಕಾತಿಗಳು ವಿಳಂಬ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಸರ್ಕಾರದ ಗಮನಕ್ಕೆ ಬಂದಿದೆ. |
| ಈ) | ಈ ಗೊಂದಲದ ನಿವಾರಣೆಗೆ ಸರ್ಕಾರ ಯಾವ ಕ್ರಮಗಳನ್ನು ತೆಗೆದುಕೊಂಡಿದೆ? | ಮೀಸಲಾತಿ ಕೋರಿ ಅರ್ಜಿ ಸಲ್ಲಿಸುವ ಹಿಂದುಳಿದ ವರ್ಗದ ಅಭ್ಯರ್ಥಿಗಳು ಸಾಮಾನ್ಯ ವರ್ಗದಡಿಯಲ್ಲಿ ಆಯ್ಕೆಯಾದಾಗ ಸಿಂಧುತ್ವ ಪ್ರಮಾಣ ಪತ್ರ ಪಡೆಯುವ/ಪಡೆಯದಿರುವ ಅಗತ್ಯತೆಯ ಕುರಿತು ಸರ್ಕಾರದ ವಿವಿಧ ಹಂತಗಳಲ್ಲಿ ನಿಯಮಾನುಸಾರ ಪರಿಶೀಲಿಸಲಾಗುತ್ತಿದೆ. |

**ಸಂಖ್ಯೆ**: ಹಿಂವಕ 304 ಬಿಸಿಎ 2023

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು.